# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಬಾಲಾಜಿ ನಾಯ್ಕ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬಿಸಿಲೇಹಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/218/ಗ್ರಾಪಂಕಾ/2011 ದಿನಾಂಕ: 26-07-2011
2. ಅಪರ ನಿಭಂಧಕರು ವಿಚಾರಣೆಗಳು-4 ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/ARE-4/ENQ/156/2011 Dt:16-12-2016
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/ARE-4/14-A/ENQ.156/2011 Dt:16-12-2016.
4. ನಿಭಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂಖ್ಯೆ: LOK/ARE-4/14-A/ENQ.156/2011 Dt:16-12-2016.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/902/ಗ್ರಾಪಂಕಾ/2016 ದಿನಾಂಕ: 27-12-2016.
6. ಶ್ರೀ ಬಾಲಾಜಿ ನಾಯ್ಕ ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ: 31-01-2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಬಾಲಾಜಿ ನಾಯ್ಕ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬಿಸಿಲೇಹಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

" ನೀವು ಬಾಲಾಜಿ ನಾಯಕ್ ಕಡೂರು ತಾಲ್ಲೂಕು, ಚಿಕ್ಕಮಂಗಳೂರು ಜಿಲ್ಲೆ ಬಿಸಿಲೇಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ದೂರುದಾರರಾದ ಶ್ರೀ ಬಿ.ಎಸ್.ನಂಜುಡಪ್ಪ ರವರ ಪತ್ನಿಯಾದ ಶ್ರೀಮತಿ ಶಾಂತ, ಬಿಸಿಲೇಹಳ್ಳಿ ಗ್ರಾಮ ಇವರಿಗೆ ಆಸರೆ ಯೋಜನೆಯಡಿ ಮನೆ ಮಂಜೂರಾಗಿದ್ದು, ಈ ಸಂಬಂಧ ಚೆಕ್ ವಿತರಣೆ ಸಂದರ್ಭದಲ್ಲಿ ಫಲಾನುಭವಿಗಳಿಂದ ರೂ. 1,000/-ಗಳ ಲಂಚದ ಮೊತ್ತವನ್ನು ದಿನಾಂಕ: 03-11-2009 ರಂದು ಸ್ವೀಕರಿಸಿ, ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಪೊಲೀಸರ ಟ್ರ್ಯಾಪ್‌ಗೆ ಒಳಗಾಗಿರುತ್ತೀರಿ. ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966ರ ನಿಯಮ 3(1) (i) ರಿಂದ (iii) ಅನ್ವಯ ದುರ್ನಡತೆ ಎಸಗಿರುತ್ತೀರಿ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಬಾಲಾಜಿ ನಾಯ್ಕ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬಿಸಿಲೇಹಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಬಾಲಾಜಿ ನಾಯ್ಕ, ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಸೇವೆಯಿಂದ ವಜಾಗೊಳಿಸುವ" ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ ಈ ಸಂಬಂಧ ಶ್ರೀ ಬಾಲಾಜಿ ನಾಯ್ಕ, ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ಅನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ದಿನಾಂಕ: 31.01.2017 ರ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ. ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

- ದೂರುದಾರರು ತಮ್ಮ ವಿಚಾರಣೆಯಲ್ಲಿ, ಆಶ್ರಯ ಮನೆ ತಮ್ಮ ಹೆಂಡತಿಗೆ ಮಂಜೂರಾಗಿದ್ದು, ತಾವು ತಮ್ಮ ಹೆಂಡತಿಯಿಂದ ಯಾವುದೇ ಅನುಮತಿ ಪಡೆದಿರಲಿಲ್ಲ ಎಂದು ಹಾಗೂ ಆ ಕುರಿತು ಮೇಲಾಧಿಕಾರಿಗಳಿಗೆ ದೂರು ನೀಡಿರುವುದಿಲ್ಲವೆಂದು ತಿಳಿಸಿರುತ್ತಾರೆ.
- ಈಗಾಗಲೆ ಮೂರು ಚೆಕ್‌ಗಳನ್ನು ನೀಡಿರುವುದಾಗಿ ಮತ್ತು ಚೆಕ್‌ಗಳಿಗೆ ಕಾರ್ಯದರ್ಶಿ ಮತ್ತು ಅಧ್ಯಕ್ಷರ ಸಹಿ ಬೇಕು ಎಂಬುದು ನನಗೆ ಗೊತ್ತು ಹಾಗೂ ಘಟನೆ ನಡೆದಾಗಿ ಅಧ್ಯಕ್ಷರ ಸಹಿ ಮಾತ್ರ ಬಾಕಿ ಇತ್ತು ಎಂಬುದಾಗಿ ದೂರುದಾರರು ಒಪ್ಪಿಕೊಂಡಿರುತ್ತಾರೆ.
- ವಿಚಾರಣಾಧಿಕಾರಿಯವರ ನೀಡಿದ ಸೂಚನೆಯಂತೆ ನಡೆದುಕೊಂಡಿರುವುದಾಗಿ ದೂರುದಾರರು ಒಪ್ಪಿಕೊಂಡಿರುತ್ತಾರೆ.
- ಪಿ.ಡಬ್ಲ್ಯೂ–3 ರವರು ವಿಚಾರಣೆವೇಳೆ ತಾವು ಘಟನೆ ನಡೆದಾಗ ಕಛೇರಿಯ ಹೊರಗಡೆ ನಿಂತಿರುವುದಾಗಿ ಒಪ್ಪಿಕೊಂಡಿರುತ್ತಾರೆ.
- ನಾನು ನನ್ನ ವಿಚಾರಣೆ ವೇಳೆಯಲ್ಲಿ ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಿರುವುದಿಲ್ಲ ಹಾಗೂ ಪಡೆದಿರುವುದಿಲ್ಲ ನನ್ನನ್ನು ವಿನಾಕಾರಣ ಪ್ರಕರಣದಲ್ಲಿ ಸೇರಿಸಲಾಗಿದೆ ನಾನು ನಿಷ್ಠೆಯಿಂದ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ ಎಂದು ತಿಳಿಸಿರುತ್ತೇನೆ.
- ಸಾಕ್ಷಗಳ ಹೇಳಿಕೆಯು ಒಂದಕ್ಕೊಂದು ವ್ಯತಿರಿಕ್ತವಾಗಿವೆ.
- ಈಗಾಗಲೆ ನನಗೆ 58 ವರ್ಷ ವಯಸ್ಸಾಗಿದ್ದು, ನನ್ನ ಮಕ್ಕಳ ವಿದ್ಯಾಭ್ಯಾಸ ಮತ್ತು ಕುಟುಂಬದ ಜವಾಬ್ದಾರಿಯನ್ನು ನೋಡಿಕೊಳ್ಳಬೇಕಾಗಿರುವುದರಿಂದ ನನಗೆ ಕಠಿಣ ಶಿಕ್ಷೆ ವಿಧಿಸಿದಲ್ಲಿ ನನಗೆ ಅನ್ಯಾಯಮಾಡಿದಂತಾಗುತ್ತದೆ ಆದ್ದರಿಂದ ಮಾನವಿಯತೆ ಆದಾರದ ಮೇಲೆ ಮಾನ್ಯ ಉಪಲೋಕಾಯುಕ್ತ ಶಿಫಾರಸ್ಸಿನಂತೆ ಕಠಿಣ ಶಿಕ್ಷೆ ವಿಧಿಸದಂತೆ ಈ ಮೂಲಕ ಪ್ರಾರ್ಥಿಸಿಕೊಳ್ಳುತ್ತೇನೆ ಎಂದು ತಿಳಿಸಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಪ್ರಮುಖವಾಗಿ ವರದಿಯ ಕಂಡಿಕೆ 15 ರಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳನ್ನು ಈ ಕೆಳಗಿನಂತೆ ಪುನರುಚ್ಛರಿಸಿದೆ.

15. Thus consideration of the totality of the evidence PW1 to PW4 and the documents marked as per Ex.P1 to P10 there is a sufficient evidence to kprove the charge leveled against the DGO regarding acceptance of the bribe from complainant/PW1/Sri Nanjundappa. It is to be stated here that, the charges levelled against the DGO that, he received bribe of Rs. 1,000/-from the complainant in connection with the issue of last instalment cheque of Rs. 7,500/- in favour of his wife Smt. Shanthamma. It is not in dispute that, Smt. Shanthamma w/o of the complainant being a resident of Bisalehalli village as beneficiary got the sanction of amount in all Rs. 30,000/- under "Ashraya Yojana Scheme" pertaining to the said Bisalehalli grama panchayathi. It is also not in dispute that, in that connection she got three instalments of Rs.7,500/- in favour of the complainant. In this connection the Ex.P4/documents seized in this case clearly demonstrates the fact and corroborate the evidence of Disciplinary Authority and demonstrates the work of release of last instalments of cheque of Rs. 7,500/- in favour of Smt. Shanthamma wife of complainant actually pending with this DGO who was working as Secretary grama Panchayath, Bisalehalli. This aspect has not been disputed by the DGO in the cross-examination of any of the witness of the Disciplinary Authority. The evidence o PW1 to PW4 it is clear that, the DGO on demand accepted a bribe of Rs.1,000/- from this PW1/Sri Nanjundappa on 03/11/2009 at the office of the grama Panchayath, Bisalehalli and the said amount recovered under Ex.P5/Mahazar tallied with the numbers of the notes mentioned in the Ex.P2/Entrustment Mahazar. Apart from the above, the hand wash solution of this DGO being turned into pink colour and in the said hand wash solution the presence of phenolphthalein being detected as per Ex.P8/chemical examination report. The DGO at the time of the trap though given explanation simply stating that, he will submit afterward and noting else. Now the DGO has taken contention that, this complaint filed and trap proceedings being created only at the instance of only one Sri Gangadharappa. The above contention of the DGO in cross-examination of PW1 to PW4 and his defence evidence is quite untenable when there is a consistent evidence regarding proof of acceptance of the bribe by the DGO on demand as stated above.

Therefore consideration of the overall oral and documentary evidence placed by the Disciplinary Authority there are probable satisfactory evidence placed on record to hold that this DGO on demand accepted a bribe from the complainant/PW1. Accordingly the articles of charge framed in this case against the DGO is proved satisfactorily. Accordingly I answer the above point in the Affirmative.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀರ್ವತೆಗೆ ಅನುಗುಣವಾಗಿ ಶ್ರೀ ಬಾಲಾಜಿ ನಾಯ್ಕ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬಿಸಿಲೇಹಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ರವರಿಗೆ "ಸೇವೆಯಿಂದ ವಜಾಗೊಳಿಸುವ" ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ ಶ್ರೀ ಬಾಲಾಜಿ ನಾಯ್ಕ, ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಆಕ್ಷೇಪಣೆಗಳನ್ನು ಒಪ್ಪಲು ಬರುವುದಿಲ್ಲ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀ ಬಾಲಾಜಿ ನಾಯ್ಕ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬಿಸಿಲೇಹಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಸೇವೆಯಿಂದ ವಜಾಗೊಳಿಸುವ" ದಂಡನೆ ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 902 ಗ್ರಾಪಂಕಾ 2016**
**ಬೆಂಗಳೂರು, ದಿನಾಂಕ-16-10-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಬಾಲಾಜಿ ನಾಯ್ಕ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬಿಸಿಲೇಹಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ. ಇವರು ಶ್ರೀ ಬಿ.ಎಸ್.ನಂಜುಡಪ್ಪ ರವರ ಪತ್ನಿಯಾದ ಶ್ರೀಮತಿ ಶಾಂತ, ಬಿಸಿಲೇಹಳ್ಳಿ ಗ್ರಾಮ ಇವರಿಗೆ ಆಸರೆ ಯೋಜನೆಯಡಿ ಮನೆ ಮಂಜೂರಾಗಿದ್ದು, ಈ ಸಂಬಂಧ ಚೆಕ್ ವಿತರಣೆ ಸಂದರ್ಭದಲ್ಲಿ ಫಲಾನುಭವಿಗಳಿಂದ ರೂ. 1,000/-ಗಳ ಲಂಚದ ಮೊತ್ತವನ್ನು ದಿನಾಂಕ: 03-11-2009 ರಂದು ಸ್ವೀಕರಿಸಿರುವುದು ಸಾಬೀತಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii) ಅಡಿಯಲ್ಲಿ ನಿರ್ದಿಷ್ಟಪಡಿಸಿರುವಂತೆ "ಸೇವೆಯಿಂದ ವಜಾಗೊಳಿಸುವ" ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

17/10/17

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಕಡೂರು ತಾಲ್ಲೂಕು ಚಿಕ್ಕಮಗಳೂರು ಜಿಲ್ಲೆ.
7. ಶ್ರೀ ಬಾಲಾಜಿ ನಾಯ್ಕ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬಿಸಿಲೇಹಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ಇವರ ಮುಖಾಂತರ).
8. ಗಣಕ ಕೋಶ
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.